# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1388 (1595) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 18-03-2021 |
| ಉತ್ತರಿಸುವವರು | : | ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಧಾನ ಮಂತ್ರಿಯವರ ಅಧ್ಯಕ್ಷತೆಯಲ್ಲಿ ರಚಿತವಾಗಿರುವ ರಾಷ್ಟ್ರೀಯ ಅಂಕಿ-ಅಂಶಗಳ ಅಭಿವೃದ್ಧಿ ಪರಿಷತ್‌ನಲ್ಲಿ ರಾಜ್ಯದಿಂದ ಯಾರು ಪ್ರತಿನಿಧಿಸುತ್ತಿದ್ದಾರೆ; (ಪೂರ್ಣ ವಿವರ ನೀಡುವುದು) | ಪ್ರಧಾನ ಮಂತ್ರಿಯವರ ಅಧ್ಯಕ್ಷತೆಯಲ್ಲಿ ರಾಷ್ಟ್ರೀಯ ಅಂಕಿ-ಅಂಶಗಳ ಅಭಿವೃದ್ಧಿ ಪರಿಷತ್ ರಚನೆಯಾಗಿರುವುದಿಲ್ಲ. ಆದ್ದರಿಂದ ರಾಜ್ಯದಿಂದ ಪ್ರತಿನಿಧಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. |
| ಆ) | ರಾಷ್ಟ್ರೀಯ ಅಂಕಿ-ಅಂಶಗಳ ಆಯೋಗದಿಂದ ಅಂಕಿ-ಅಂಶ ಸಂಗ್ರಹಣೆ ಮತ್ತು ಸಮೀಕ್ಷೆ ಸಲುವಾಗಿ ರಾಜ್ಯ ಸರ್ಕಾರಕ್ಕೆ ಕಳೆದ 3 ವರ್ಷಗಳಲ್ಲಿ ಬಿಡುಗಡೆಯಾಗಿರುವ ಅನುದಾನವೆಷ್ಟು ಮತ್ತು ಈ ಅನುದಾನವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ಬಳಸಲಾಗಿದೆ; (ವಿವರ ನೀಡುವುದು) | ಕಳೆದ 03 ವರ್ಷಗಳಲ್ಲಿ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ. |
| ಇ) | ಅಖಿಲ ಭಾರತೀಯ ಸೇವೆಗಳಂತೆ ಪ್ರಸಕ್ತದಲ್ಲಿರುವ ಭಾರತೀಯ ಅಂಕಿ-ಅಂಶ ಸೇವೆ, ರಾಜ್ಯ ಅಂಕಿ-ಅಂಶಗಳ ಸೇವೆ ಮತ್ತು ಇತರೆ 'ಎ' ವರ್ಗದ ಸೇವೆಗಳನ್ನು ಒಟ್ಟುಗೂಡಿಸಿ, ಅಖಿಲ ಭಾರತೀಯ ಅಂಕಿ-ಅಂಶಗಳ ಸೇವೆಯನ್ನು ಸ್ಥಾಪಿಸುವ ಕೇಂದ್ರ ಸರ್ಕಾರದ ನಿರ್ಣಯಕ್ಕೆ ರಾಜ್ಯ ಸರ್ಕಾರ ಸಮ್ಮತಿಸಿದೆಯೇ? (ಪೂರ್ಣ ವಿವರ ನೀಡುವುದು) | ರಾಜ್ಯ ಅಂಕಿ-ಅಂಶಗಳ ಸೇವೆ ಮತ್ತು ಭಾರತೀಯ ಅಂಕಿ-ಅಂಶಗಳ ಸೇವೆಯಲ್ಲಿನ ವೃಂದಗಳ ಅಸಮತೋಲನವನ್ನು ಹಾಗೂ ರಾಜ್ಯ ಅಂಕಿ-ಅಂಶಗಳ ಸೇವೆಗಳ ಅಧಿಕಾರಿಗಳ ಹಿತಾಸಕ್ತಿಯನ್ನು ಗಣನೆಗೆ ತೆಗೆದುಕೊಂಡು ಅಖಿಲ ಭಾರತೀಯ ಅಂಕಿ-ಅಂಶಗಳ ಸೇವೆ ಯನ್ನು ಸ್ಥಾಪಿಸಬಹುದಾಗಿದೆ ಎಂದು ಕೇಂದ್ರ ಸರ್ಕಾರಕ್ಕೆ ದಿನಾಂಕ: 15.04.2013 ರಂದು ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.(ಪ್ರತಿ ಲಗತ್ತಿಸಿದೆ). |

**ಸಂಖ್ಯೆ:** ಪಿಡಿಎಸ್ 44 ಎಸ್‌ಎಂಸಿ 2021

**(ಡಾ: ನಾರಾಯಣಗೌಡ)**
ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನೆ,
ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು